ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Sri Padmavathi Power Private Limited ಕಂಪನಿಗೆ ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 100 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ:
1 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಏಕ ಕಡತ ಸಂಖ್ಯೆ: KREDL/08/SPPPL-100 MW /Turavanur/2017/ S-1454

2 ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ: KREDL/08/SPPPL-100 MW/ 2017/ 2131 ದಿನಾಂಕ: 23.03.2017.

1572
25/04/17

* * *

ಪ್ರಸ್ತಾವನೆ :-

GM (Tech) I/C

M/s Sri Padmavathi Power Private Limited ಕಂಪನಿಯು ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ ತಾಲ್ಲೂಕಿನ ಮುಸ್ಟೂರ್, ಸಿಡಲ್ಮಾನಿ, ಮೇಸನಾಯಕನಹಟ್ಟಿ, ಕಡಮಲಾನ್ನಟ್ಟೆ, ಗೊಲ್ಲರಹಟ್ಟಿ, ಭೀಮಗೊಂಡನಹಳ್ಳಿ, ಜೋಗಿಹಟ್ಟಿ, ಬಾಲನಾಯಕನಹಟ್ಟಿ, ಬೋಗೆಲಾರಹಟ್ಟಿ, ಅರೇನಹಳ್ಳಿ, ಬಂಗಾರಕ್ಕನಹಳ್ಳಿ, ತುರುವನೂರ್ ಮತ್ತು ಕುನಬೇವು ಗ್ರಾಮಗಳಲ್ಲಿ 100 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ :16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸಲಾಗಿತ್ತು. ಸಮಿತಿಯು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, M/s Sri Padmavathi Power Private Limited ಕಂಪನಿಯವರು ಚಿತ್ರದುರ್ಗ ಜಿಲ್ಲೆಯ, ಚಿತ್ರದುರ್ಗ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 100 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಬಗ್ಗೆ ಎರಡು ವರ್ಷದೊಳಗಾಗಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿ ತಯಾರಿಸಿ ಕ್ರೆಡಲ್ ಗೆ ಸಲ್ಲಿಸಬೇಕೆಂಬ ಷರತ್ತಿಗೊಳಪಟ್ಟು ತಾತ್ವಿಕ ಅನುಮೋದನೆ ಯನ್ನು ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಈ ಮಧ್ಯೆ, ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರದಲ್ಲಿ M/s Sri Padmavathi Power Private Limited ಕಂಪನಿಗೆ ಚಿತ್ರದುರ್ಗ ಜಿಲ್ಲೆಯ, ಚಿತ್ರದುರ್ಗ ತಾಲ್ಲೂಕಿನ ಮುಸ್ಟೂರ್, ಸಿಡಲ್ಮಾನಿ, ಮೇಸನಾಯಕನಹಟ್ಟಿ, ಕಡಮಲಾನ್ನಟ್ಟೆ, ಗೊಲ್ಲರಹಟ್ಟಿ, ಭೀಮಗೊಂಡನಹಳ್ಳಿ, ಜೋಗಿಹಟ್ಟಿ, ಬಾಲನಾಯಕನಹಟ್ಟಿ, ಬೋಗೆಲಾರಹಟ್ಟಿ, ಅರೇನಹಳ್ಳಿ, ಬಂಗಾರಕ್ಕನಹಳ್ಳಿ, ತುರುವನೂರ್ ಮತ್ತು ಕುನಬೇವು

1856
26.04.17

ಗ್ರಾಮಗಳಲ್ಲಿ 100 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಸಂಬಂದಿಸಿದಂತೆ ತಾತ್ವಿಕ ಅನುಮೋದನೆ ನೀಡುವ ಬದಲು ಕ್ರೆಡಲ್‌ನ ಜೊತೆಗೆ ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಡಿ.ಪಿ.ಆರ್ ಶುಲ್ಕವನ್ನು ಕ್ರೆಡಲ್‌ಗೆ ಪಾವತಿಸಬೇಕೆಂಬ ಷರತ್ತಿನೊಂದಿಗೆ ಹಂಚಿಕೆ ಆದೇಶ ನೀಡಬಹುದೆಂದು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 73 ಎನ್‌ಸಿಇ 2017,**
**ಬೆಂಗಳೂರು, ದಿನಾಂಕ : 20.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, M/s Sri Padmavathi Power Private Limited ಕಂಪನಿಗೆ ಚಿತ್ರದುರ್ಗ ಜಿಲ್ಲೆಯ, ಚಿತ್ರದುರ್ಗ ತಾಲ್ಲೂಕಿನ ಮುಸ್ತೂರ್, ಸಿಡಲ್ಮಾನಿ, ಮೇಸನಾಯಕನಹಟ್ಟಿ, ಕಡಮಲಾನ್ನಕಟ್ಟೆ, ಗೊಲ್ಲರಹಟ್ಟಿ, ಭೀಮಗೊಂಡನಹಳ್ಳಿ, ಜೋಗಿಹಟ್ಟಿ, ಬಾಲನಾಯಕನಹಟ್ಟಿ, ಬೋಗೆಲಾರಹಟ್ಟಿ, ಅರೇನಹಳ್ಳಿ, ಬಂಗಾರಕ್ಕನಹಳ್ಳಿ, ತುರುವನೂರ್ ಮತ್ತು ಕುನಬೇವು ಗ್ರಾಮಗಳಲ್ಲಿ 100 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಕ್ರೆಡಲ್‌ನ ಜೊತೆಗೆ ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಡಿ.ಪಿ.ಆರ್ ಶುಲ್ಕವನ್ನು ಕ್ರೆಡಲ್‌ಗೆ ಪಾವತಿಸಬೇಕೆಂಬ ಷರತ್ತಿನೊಂದಿಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

Schedule

Geographical area description for 100 MW capacity wind power project

| Topo Sheet No | Proposed capacity in MW | Near by villages of the proposed area and district | Geographical area description of the project |
|---|---|---|---|
| 57 B/7 | 100 MW<br>(50 Nos x 2000 kW) | Musturu, Siddalmani, Mesanayakanahatti, Kadamallanakatte, Gollarahatti, Bhimagondanahalli, Jogihatti, Balanayakanahatti, Bogelarahatti, Harenahalli, Bangarakanahalli, Turuvanur, Kunabevu, Chitradurga Taluk, Chitradurga District. | The proposed areas is Surrounded by<br>Part-A (Point- A-B-C-D-E-F-G-H-I-J-K-L-M-A),<br>Part-B (Point–N-O-P-Q-N)<br>and area is held in the following Geographical co-ordinates as:<br>57 B/7: PART-A<br>Point A: Lat: 14°20'28.32"- Long: 76°24'30.24"N<br>Point B: Lat: 14°22'56.28"- Long:76°23'25.08" N<br>Point C: Lat: 14°25'1.2"- Long: 76°23'22.92"N<br>Point D: Lat: 14°25'1.92"- Long: 76°25'4.08"N<br>Point E: Lat: 14°29'38.76"- Long: 76°25'2.64"N<br>Point F: Lat: 14°29'38.76"- Long: 76°28'11.28"N<br>Point G: Lat: 14°28'40.8"- Long:76°29'8.16"N<br>Point H: Lat: 14°22'6.24"- Long: 76°28'25.32"N<br>Point I: Lat: 14°22'12.36"- Long: 76°27'13.32"N<br>Point J: Lat: 14°23'51.36"- Long: 76°27'9.72"N<br>Point K: Lat: 14°23'52.44"- Long: 76°28'22.44"N<br>Point L: Lat: 14°23'3.84"- Long: 76°25'37.92"N<br>Point M: Lat: 14°22'45.48"- Long: 76°26'45.6"N<br>Peaks: 656, 668, 657, 653, 630, 679, 697, 632, 683, 692 & 726.<br>57 B/7: PART-B<br>Point N: Lat: 14°20'13.2"- Long: 76°22'31.08"N<br>Point O: Lat: 14°21'7.56"- Long:76°22'19.2" N<br>Point P: Lat: 14°21'19.08"- Long: 76°23'21.48"N.<br>Point Q: Lat: 14°20'16.8"- Long: 76°23'44.52"N<br>Paek: 724 m AMSL. |
| **Total** | **100 MW** | | |

.....3

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿಸಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ಎಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು /ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು/ಸ್ವಂತ ಬಳಕೆ ಮಾಡಿಕೊಳ್ಳಲು ಕೂಡ ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.
10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕಾ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

20.04

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

.....4

ಪ್ರತಿ:

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

5 ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

6 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

8 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.

9 ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಸೆಸ್ಕ್/ಜೆಸ್ಕಾಂ/ಮೆಸ್ಕಾಂ/ಹೆಸ್ಕಾಂ.

10 ಜಿಲ್ಲಾಧಿಕಾರಿ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

11 ಉಪ ಅರಣ್ಯ ಸಂರಕ್ಷಣಾಧಿಕಾರಿ, ಚಿತ್ರದುರ್ಗ.ಪ್ರಾದೇಶಿಕ ವಿಭಾಗ, ಚಿತ್ರದುರ್ಗ.

12 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

13 M/s Sri Padmavathi Power Private Limited, Regd Office No.30, 14 th 'A' Cross, WOC Road, Mahalakshmipuram, Bangalore-560086.

14 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

15 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

16 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.